ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಶುಕ್ರವಾರ, ದಿನಾಂಕ : 06 ನೇ ಮಾರ್ಚ್, 2020

ಪ್ರತಿ ವರ್ಷ ಡಿಸೆಂಬರ್ 3 ರಂದು ಅಂಗವಿಕಲರ ದಿನಾಚರಣೆಯನ್ನು ಆಚರಿಸುವ ಕುರಿತು

ಶ್ರೀ ಆರ್. ಪ್ರಸನ್ನಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

326 (316) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಪ್ರತಿ ವರ್ಷ ಡಿಸೆಂಬರ್ 3 ರಂದು ಅಂಗವಿಕಲರ ದಿನಾಚರಣೆಯನ್ನು ಸರ್ಕಾರ ಆಚರಿಸುತ್ತಿರುವುದು ನಿಜವೇ ;

(ಆ) ಹಾಗಿದ್ದಲ್ಲಿ, ಅಂಗವಿಕಲರುಗಳು ಅನೇಕ ಸವಲತ್ತುಗಳನ್ನು ಪಡೆಯಲು ಸರ್ಕಾರದ ನೀತಿ ನಿಯಮಗಳು ಅಡ್ಡಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ಬಂದಿದ್ದಲ್ಲಿ, ತೆಗೆದುಕೊಂಡ ಕ್ರಮವೇನು ; (ವಿವರ ನೀಡುವುದು)

(ಇ) ಅಂಗವಿಕಲರ ಮಾಸಿಕ ಪಿಂಚಣಿ ಪಡೆಯಲು ಪೋಷಕರ ವಾರ್ಷಿಕ ವರಮಾನ `. 11.500 ಕ್ಕೆ ನಿಗಧಿ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಇದು ಇಂದಿನ ಕಾಲಕ್ಕೆ ಪ್ರಸ್ತುತವೇ ; ಸರ್ಕಾರ ಅಂಗವಿಕಲರ ನೆರವಿಗೆ ಯಾವ ರೀತಿ ಕಾರ್ಯಕ್ರಮ ರೂಪಿಸಿದೆ ; (ವಿವರ ನೀಡುವುದು)

(ಈ) ಪೋಷಕರ ವರಮಾನದ ಮಿತಿ ಏರಿಕೆಯಾಗದೇ ಯಾವುದೇ ಸವಲತ್ತುಗಳ ಫಲ ಪಡೆಯಲು ಅಂಗವಿಕಲರಿಗೆ ಸಾಧ್ಯವಾಗದಿರುವುದರಿಂದ ಸರ್ಕಾರ ಈ ಬಗ್ಗೆ ತಕ್ಷಣ ಕ್ರಮ ಕೈಗೊಳ್ಳುವುದೇ ?